<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ</u>

C.C No. 168/2013
CW-09 PW-08

ಹೆಸರು : ನಾಗೇಂದ್ರ ಗುತ್ತೇದಾರ

ತಂದೆ ಹೆಸರು : ಕೃಷ್ಣಯ್ಯಾ

ವಯಸ್ಸು : 48 ವರ್ಷ

ಉದ್ಯೋಗ : ಒಕ್ಕಲುತನ

ವಾಸ ಸ್ಥಳ : ಕರದಾಳ ಗ್ರಾಮ, ತಾಃ ಚಿತ್ತಾಪೂರ

---

**<u>ಪ್ರಮಾಣವಚನ ಭೋಧಿಲಾಯಿತು. ದಿಃ 15-05-2024</u>**

<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ</u>

ನನಗೆ ಚಾಸಾಃ 10 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸುಮಾರು 17-18 ವರ್ಷಗಳ ಹಿಂದೆ ಪೊಲೀಸರು ಚಿತ್ತಾಪೂರ ಪೊಲೀಸ ಠಾಣೆಯಲ್ಲಿ ಮೂರು ದಾಖಲೆಗಳಿಗೆ ನನ್ನ ಸಹಿಗಳನ್ನು ಪಡೆದಿದ್ದರು. ಸಾಕ್ಷಿಯು ಎರಡು ದಾಖಲಾತಿ ಪಂಚನಾಮೆ ಹಾಗೂ ಒಂದು ಕೈಬರಹ ರುಜು ಪಡೆದ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-6 ರಿಂದ ನಿಪಿ-8 ಎಂದು ಸಾಕ್ಷಿಯ ಸಹಿಗಳನ್ನು ನಿಪಿ-6 (ಎ) ರಿಂದ ನಿಪಿ-8 (ಎ) ಎಂದು ಗುರುತಿಸಲಾಯಿತು. ನಿಪಿ-6 ರಿಂದ ನಿಪಿ-8 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ರಶೀದಿಗಳನ್ನಾಗಲೀ ಹಾಗೂ ಕ್ಯಾಶ ಬುಕ್‌ನ್ನಾಗಲೀ ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಅದೇ ರೀತಿ ಆರೋಪಿಯ ಕೈಬರಹದ ರುಜುವನ್ನಾಗಲೀ ಪಡೆದುಕೊಂಡಿರುವುದಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ

ನೀಡಲಾಯಿತು.)

**<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>**

ದಿಃ 03-03-2006 ರಂದು ಪೊಲೀಸರು ನನ್ನ ಸಮಕ್ಷಮ ನಿಪಿ-6 ರಂತೆ ಪಂಚನಾಮೆ ಕ್ರಮ ಜರುಗಿಸಿ, ಮುಂಗಡ ಒಂದು ರಶೀದಿ ಮತ್ತು ಆಹಾರ ಧಾನ್ಯದ ರಶೀದಿ ಪುಸ್ತಕಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ 27-06-2006 ರಂದು ಪೊಲೀಸರು ನನ್ನ ಸಮಕ್ಷಮ ನಿಪಿ-7 ರಂತೆ ಪಂಚನಾಮೆ ಕ್ರಮ ಜರುಗಿಸಿ, ಆಭಾವ ಕಾಮಗಾರಿ ಪರಿಹಾರ ಕ್ಯಾಶ ಬುಕ್ ನಂಃ 4, ಎಸಜಿಆರವೈ ಕ್ಯಾಶಬುಕ್ ನಂಃ 2, ಆಹಾರ ಧಾನ್ಯದ ರಿಜಿಸ್ಟರಗಳು ಇತ್ಯಾದಿಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ 09-11-2005 ರಂದು ಪೊಲೀಸರು ನನ್ನ ಸಮಕ್ಷಮ ನಿಪಿ-8 ರಂತೆ ಪಂಚನಾಮೆ ಕ್ರಮ ಜರುಗಿಸಿ, ಆರೋಪಿಯ ಕೈಬರಹ ಹಾಗೂ ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-6 ರಿಂದ ನಿಪಿ-8 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ.ಸಿ.ಬಿ.ಎ ಪರ ಶ್ರೀ ಎಸ್.ಬಿ.ಕೆ. ವಕೀಲರಿಂದ - ಏನು ಇಲ್ಲಾ</u>**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.